## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಸಹಕಾರ ಸಂಘಗಳ ಹಾಗೂ ಸೌಹಾರ್ದ ಸಹಕಾರಿಗಳ 2020-21ರ ಲೆಕ್ಕಪರಿಶೋಧನಾ ವರದಿಯನ್ನು ಸಲ್ಲಿಸಲು ಕಾಲಾವಧಿಯನ್ನು ವಿಸ್ತರಿಸುವ ಬಗ್ಗೆ.

**ಓದಲಾಗಿದೆ:-** ಸರ್ಕಾರದ ಆದೇಶ ಸಂಖ್ಯೆ: ಸಇ 45 ಸಿಎಲ್‌ಎಮ್ 2021, ದಿನಾಂಕ:23.08.2021.

*****

**<u>ಪ್ರಸ್ತಾವನೆ:</u>**

ಮೇಲೆ ಓದಲಾದ ಆದೇಶದಲ್ಲಿ ಸಹಕಾರ ಸಂಘಗಳ ಹಾಗೂ ಸೌಹಾರ್ದ ಸಹಕಾರಿಗಳು ಸೆಪ್ಟೆಂಬರ್ ತಿಂಗಳ ಒಂದರೊಳಗಾಗಿ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು ಎಂಬುದನ್ನು ಸಡಿಲಿಸಿ, 2020-21ನೇ ಸಾಲಿನ ಲೆಕ್ಕಪರಿಶೋಧನಾ ಕಾರ್ಯವನ್ನು ಮುಗಿಸಿ ವರದಿಗಳನ್ನು ಸಲ್ಲಿಸಲು ದಿನಾಂಕ:31.10.2021ರ ವರೆಗೆ ಅವಧಿಯನ್ನು ವಿಸ್ತರಿಸಿ ಆದೇಶಿಸಲಾಗಿರುತ್ತದೆ.

ಮುಂದುವರೆದು, ಕೋವಿಡ್-19 ಸಾಂಕ್ರಾಮಿಕ ರೋಗದ ಹಾಗೂ ಇನ್ನಿತರೆ ಕಾರಣಗಳಿಂದಾಗಿ ಸಹಕಾರ ಸಂಘಗಳ ಹಾಗೂ ಸೌಹಾರ್ದ ಸಹಕಾರಿಗಳ 2020-21ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಮೇಲ್ಕಂಡ ಅವಧಿಯಲ್ಲಿ ಸಲ್ಲಿಸುವುದು ಕಷ್ಟಸಾಧ್ಯವಾಗಿರುವ ಹಿನ್ನೆಲೆಯಲ್ಲಿ ನವೆಂಬರ್ ಅಂತ್ಯದವರೆಗೆ ಅವಧಿ ವಿಸ್ತರಿಸಲು ಸಹಕಾರಿಗಳು/ ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರಿಂದ ಸರ್ಕಾರಕ್ಕೆ ಮನವಿಗಳು ಸ್ವೀಕೃತವಾಗಿರುತ್ತದೆ. ಮೇಲ್ಕಂಡ ಅಂಶಗಳನ್ನು ಸರ್ಕಾರವು ಪುನರ್‌ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಸಇ 45 ಸಿಎಲ್‌ಎಮ್ 2021 (ಇ) ಬೆಂಗಳೂರು, ದಿನಾಂಕ:25.10.2021</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ:ಸಇ 45 ಸಿಎಲ್‌ಎಮ್ 2021, ದಿನಾಂಕ:23.08.2021ರಲ್ಲಿ ಸಹಕಾರ ಸಂಘಗಳು/ ಸೌಹಾರ್ದ ಸಹಕಾರಿಗಳು 2020-21ನೇ ಸಾಲಿನ ಲೆಕ್ಕಪರಿಶೋಧನಾ ಕಾರ್ಯಗಳನ್ನು ಮುಗಿಸಿ ವರದಿಗಳನ್ನು ಸಲ್ಲಿಸಲು ದಿನಾಂಕ:31.10.2021ರಂದು ನಿಗದಿಪಡಿಸಿರುವ ಅವಧಿಯನ್ನು ಮಾರ್ಪಡಿಸಿ ದಿನಾಂಕ:25.11.2021ರವರೆಗೆ ಸಲ್ಲಿಸಲು ಕಾಲಾವಧಿಯನ್ನು ವಿಸ್ತರಿಸಿ ಆದೇಶಿಸಿದೆ.

ಮುಂದುವರೆದು, ಮೇಲಿನ ಅವಧಿ ವಿಸ್ತರಣೆಗೆ ಅನುಗುಣವಾಗಿ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 63ರ ಇತರೆ ಉಪಬಂಧಗಳು ಹಾಗೂ ಇದಕ್ಕೆ ಸಂಬಂಧಿಸಿದ ನಿಯಮಗಳು ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997 ರ ಪ್ರಕರಣ 33 ರ

→

Scanned with CamScanner

ಇತರೆ ಉಪಬಂಧಗಳಲ್ಲಿನ ಅವಕಾಶಗಳಿಗೆ ಅವಧಿ ವಿಸ್ತರಿಸಲು ಲೆಕ್ಕಪರಿಶೋಧನಾ ನಿರ್ದೇಶಕರು ಸೂಕ್ತ ಆದೇಶ ಹೊರಡಿಸಲು ಕ್ರಮವಿಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

25/10

**(ಎಂ. ವೆಂಕಟಸ್ವಾಮಿ)**
ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ,
ಸರ್ಕಾರದ ಜಂಟಿಕಾರ್ಯದರ್ಶಿ,
ಸಹಕಾರ ಇಲಾಖೆ.

**ಇವರಿಗೆ**

ಸಂಕಲನಕಾರರು ಕರ್ನಾಟಕ ರಾಜ್ಯಪತ್ರ ಬೆಂಗಳೂರು ಇವರಿಗೆ ಕರ್ನಾಟಕ ರಾಜ್ಯ ಪತ್ರದಲ್ಲಿ ಕೂಡಲೇ ಪ್ರಕಟಿಸಿ, ಅದರ 25 ಪ್ರತಿಗಳನ್ನು ಒದಗಿಸಲು ಕೋರಿದೆ.

**ಪ್ರತಿಗಳು: -**

1. ಮಹಾಲೇಖಪಾಲರು, (ಜಿ&ಎಸ್ಎಸ್ಎ), (ಇ & ಆರ್ಎಸ್ಎ), (ಎ&ಇ) ಕರ್ನಾಟಕ ಹೊಸಕಟ್ಟಡ, ಆಡಿಟ್ ಭವನ, ಅಂಚೆಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-01.
2. ಸಹಕಾರ ಸಂಘಗಳ ನಿಬಂಧಕರು, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು-52.
3. ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು
4. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರು, ನಂ.17, ಜಯನಿವಾಸ, ಶಂಕರಮಠರಸ್ತೆ, ಬಸವನಗುಡಿ, ಬೆಂಗಳೂರು.
5. ಮಾನ್ಯ ಸಹಕಾರ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
6. ಸಹಕಾರ ಸಂಘಗಳ ಜಂಟಿ ನಿಬಂಧಕರು/ಲೆಕ್ಕ ಪರಿಶೋಧನಾ ಜಂಟಿ ನಿರ್ದೇಶಕರು ಬೆಂಗಳೂರು/ ಮೈಸೂರು/ ಕಲಬುರ್ಗಿ/ಬೆಳಗಾವಿ ಪ್ರಾಂತ .
7. ರಾಜ್ಯದ ಎಲ್ಲಾ ಸಹಕಾರ ಸಂಘಗಳ ಉಪ ನಿಬಂಧಕರುಗಳಿಗೆ (ಸಹಕಾರ ಸಂಘಗಳ ನಿಬಂಧಕರ ಮೂಲಕ)
8. ರಾಜ್ಯದ ಎಲ್ಲಾ ಸಹಕಾರ ಸಂಘಗಳ ಉಪ ನಿರ್ದೇಶಕರುಗಳಿಗೆ (ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರ ಮೂಲಕ).
9. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್ ನಿ., ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ನಿ., ಬೆಂಗಳೂರು.
11. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಹಾಲು ಉತ್ಪಾದಕರ ಮಹಾಮಂಡಳ ನಿ., (ಕೆಎಂಎಫ್), ಬೆಂಗಳೂರು.
12. ಮುಖ್ಯಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಪಟ್ಟಣ ಸಹಕಾರ ಬ್ಯಾಂಕುಗಳ ಮಹಾಮಂಡಳ ನಿ., ಜೋಡಿರಸ್ತೆ, ಬೆಂಗಳೂರು-27.
13. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ನಿರ್ಮಾಣ ಭವನ, ಡಾ||ರಾಜಕುಮಾರ್ ರಸ್ತೆ, 1ನೇ ಬ್ಲಾಕ್ ರಾಜಾಜಿನಗರ, ಬೆಂಗಳೂರು-10.
14. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಹಕಾರ ಇಲಾಖೆ, ಬೆಂಗಳೂರು.
15. ಶಾಖಾ ರಕ್ಷಾ ಕಡತ ಹೆಚ್ಚುವರಿ ಪ್ರತಿ.

Scanned with CamScanner